## ವಿಧಾನ ಪರಿಷತ್ತು ಸದಸ್ಯರುಗಳಾದ ಮಾನ್ಯ ಶ್ರೀ ಮರಿತಿಬ್ಬೇಗೌಡ ಹಾಗೂ ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ ಇವರುಗಳು ನಿಯಮ-72 ರಡಿ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ

### ಗಮನ ಸೆಳೆಯುವ ಸೂಚನೆ

ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲ್ಲೂಕು, ಕೋಟಗಲ್ ಗ್ರಾಮದ ಸರ್ವೆ ನಂ.11ರಲ್ಲಿ ಜಿ.ಟಿ.ಬಿ ಕ್ರಷರ್ಸ್ ಇವರು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳೊಂದಿಗೆ ಷಾಮೀಲಾಗಿ ಕಾನೂನು ಬಾಹಿರವಾಗಿ, ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿಕೊಂಡು, ಸರ್ಕಾರ ನೀಡಿದ ಮಂಜೂರಾತಿಗಿಂತ ಹೆಚ್ಚು ಗಣಿಗಾರಿಕೆ ನಡೆಸುವ ಮೂಲಕ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡುತ್ತಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಗಣಿ ಮತ್ತು ಭೂವಿಜ್ಞಾನ ಇಲಾಖೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

### ಸರ್ಕಾರದ ಉತ್ತರ

ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲ್ಲೂಕು, ಕೋಟಗಲ್ ಗ್ರಾಮದ ಸರ್ವೆ ನಂ.11 ರಲ್ಲಿ ಶ್ರೀಮತಿ.ಹೆಚ್.ಕೆ.ಸಾವಿತ್ರಿ ಪ್ರೊ. ಜಿ.ಟಿ.ಬಿ ಕ್ರಷರ್ಸ್ ರವರಿಗೆ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994 ರಂತೆ ಕಂದಾಯ ಮತ್ತು ಅರಣ್ಯ ಇಲಾಖೆ ನಿರಾಕ್ಷೇಪಣಾ ಪತ್ರ, ಪರಿಸರ ಅನುಮತಿ ಪತ್ರ ಪಡೆದು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಅನುಮೋದನೆಯೊಂದಿಗೆ ದಿನಾಂಕ:10-07-2017 ರಿಂದ ಜಾರಿಗೆ ಬರುವಂತೆ 20 ವರ್ಷಗಳ ಅವಧಿಗೆ ಕಲ್ಲುಗಣಿ ಗುತ್ತಿಗೆ ಸಂಖ್ಯೆ-260ನ್ನು ಮಂಜೂರು ಮಾಡಲಾಗಿರುತ್ತದೆ. ಸದರಿ ಗುತ್ತಿಗೆದಾರರು ಗುತ್ತಿಗೆ ಪ್ರದೇಶದಲ್ಲಿ ಸ್ಫೋಟಕ ಬಳಸಿ ಗಣಿಗಾರಿಕೆ ನಡೆಸಲು Director General Mines Safety (DGMS) ರವರಿಂದ ಅನುಮತಿ ಪಡೆದು ಕಟ್ಟಡ ಕಲ್ಲುಗಣಿ ಗುತ್ತಿಗೆ ಪ್ರದೇಶದಲ್ಲಿ ಗಣಿಗಾರಿಕೆ ನಡೆಸುತ್ತಿದ್ದು, ಗುತ್ತಿಗೆ ಪ್ರದೇಶವನ್ನು ಹೊರತುಪಡಿಸಿ ಒತ್ತುವರಿ ಮಾಡಿ ಯಾವುದೇ ರೀತಿಯ ಅನಧಿಕೃತ ಗಣಿಗಾರಿಕೆ ನಡೆಸಿರುವುದು ಕಂಡುಬಂದಿರುವುದಿಲ್ಲ ಎಂಬುದಾಗಿ ಸಕ್ಷಮ ಪ್ರಾಧಿಕಾರಿಯಾದ ಹಿರಿಯ ಭೂವಿಜ್ಞಾನಿ, ಚಿಕ್ಕಬಳ್ಳಾಪುರ ಜಿಲ್ಲೆ ರವರು ವರದಿ ಸಲ್ಲಿಸಿರುತ್ತಾರೆ.

Halappa B.

**(ಆಚಾರ್ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಮತ್ತು ಹಿರಿಯ
ನಾಗರೀಕರ ಸಬಲೀಕರಣ ಸಚಿವರು

ಸಂಖ್ಯೆ: ಸಿಐ 25 ಎಂಜಿಎಸ್ 2022